ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹತ್ತನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 14ನೇ ಜುಲೈ, 2016

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ ಹಾಗೂ ಖಾಸಗೀ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು–

1. 2015–16ನೇ ಸಾಲಿನ ಅರ್ಜಿಗಳ ಸಮಿತಿಯ 20ನೇ ವರದಿಯನ್ನೊಪ್ಪಿಸುವುದು.

2. 2015–16ನೇ ಸಾಲಿನ ಖಾಸಗೀ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ 9ನೇ ವರದಿಯನ್ನೊಪ್ಪಿಸುವುದು.

3. ಅರ್ಜಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು – ಗೌರಿಬಿದನೂರು ಪಟ್ಟಣದಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿ–9ರ ರಸ್ತೆ ಅಗಲೀಕರಣಕ್ಕಾಗಿ ಅಕ್ಕ–ಪಕ್ಕದ ಕಟ್ಟಡಗಳ ಜಾಗವನ್ನು ವಶಕ್ಕೆ ತೆಗೆದುಕೊಂಡು ಪರಿಹಾರವನ್ನೂ ನೀಡದೆ, ಉಳಿಕೆ ಜಾಗದಲ್ಲಿ ಸ್ವಂತ ಖರ್ಚಿನಿಂದ ವಾಣಿಜ್ಯ ವ್ಯವಹಾರ ಮಾಡಲು ಕಟ್ಟಡ ಕಟ್ಟಿಕೊಂಡಿರುವ ನಾಗರಿಕರಿಗೆ ನಗರಸಭೆಯವರು ಪರವಾನಿಗೆಯನ್ನೂ ನೀಡದೆ ತೊಂದರೆಯಾಗಿರುವುದರಿಂದ, ಪರವಾನಿಗೆಯನ್ನು ನೀಡುವಂತೆ ಸ್ಥಳೀಯರು ಮನವಿ ಸಲ್ಲಿಸಿರುವ ಅರ್ಜಿಯನ್ನು ಒಪ್ಪಿಸುವುದು.

...2.

4. ವಿತ್ತೀಯ ಕಾರ್ಯಕಲಾಪಗಳು

1. 2016-17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ.

ಬೇಡಿಕೆ ಸಂಖ್ಯೆ		ಬೇಡಿಕೆಯ ಹೆಸರು
07	:	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
14	:	ಕಂದಾಯ
08	:	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
16	:	ವಸತಿ
01	:	ಕೃಷಿ ಮತ್ತು ತೋಟಗಾರಿಕೆ
02	:	ಪಶುಸಂಗೋಪನೆ ಮತ್ತು ಮೀನುಗಾರಿಕೆ
09	:	ಸಹಕಾರ

2. 2016-17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಹಾಗೂ ಚರ್ಚೆ.

ಬೇಡಿಕೆ ಸಂಖ್ಯೆ		ಬೇಡಿಕೆಯ ಹೆಸರು
24	:	ಇಂಧನ
21	:	ಜಲಸಂಪನ್ಮೂಲ
18	:	ವಾಣಿಜ್ಯ ಮತ್ತು ಕೈಗಾರಿಕೆ
23	:	ಕಾರ್ಮಿಕ

5. ಹಕ್ಕುಚ್ಯುತಿ ಸೂಚನೆ

ಶ್ರೀ ಪಿ. ಆರ್. ಸುಧಾಕರ್‌ಲಾಲ್ ರವರು ಕೊರಟಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಜನರು ವಾಸಿಸುವ ಕಾಲೋನಿಗಳಲ್ಲಿ 2016-17ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆ/ಗಿರಿಜನ ಉಪ ಯೋಜನೆಗಳಡಿ ಕೈಗೊಳ್ಳಬೇಕಾದ ಕಾಮಗಾರಿಗಳ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮತ್ತು ಮುಖ್ಯ ಅಭಿಯಂತರರುಗಳು ಸ್ಥಳೀಯ ಶಾಸಕರನ್ನು ಕಡೆಗಣಿಸಿ ಹಕ್ಕುಚ್ಯುತಿಯುಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸುವುದು.

...3.

6. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು:

1. **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ,** 2016
ಶ್ರೀ ಸಿದ್ದರಾಮಯ್ಯ (ಮುಖ್ಯ ಮಂತ್ರಿಗಳು) ಅವರು:–

ಅ) 2016ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕ,** 2016
ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು:–

ಅ) 2016ನೇ ಸಾಲಿನ ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ (ತಿದ್ದುಪಡಿ) ವಿಧೇಯಕ,** 2016
ಶ್ರೀ ಕೆ.ಜೆ. ಜಾರ್ಜ್ (ಬೆಂಗಳೂರು ಅಭಿವೃದ್ಧಿ ಹಾಗೂ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಸಚಿವರು) ಅವರು:–

ಅ) 2016ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ,** 2016
ಶ್ರೀ ಬಸವರಾಜ್ ರಾಯರಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು:–

ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

7.ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಎಂ.ಟಿ.ಕೃಷ್ಣಪ್ಪ, ಪಿ.ಆರ್.ಸುಧಾಕರ್‌ಲಾಲ್ ಮತ್ತು ಕೆ.ಎಸ್. ಪುಟ್ಟಣ್ಣಯ್ಯ– ಇವರುಗಳು ರಾಜ್ಯದಲ್ಲಿ ತೆಂಗಿನ ಮತ್ತು ಅಡಿಕೆ ಬೆಲೆ ಕುಸಿದಿರುವುದಲ್ಲದೆ ಆ ಫಸಲು, ರೋಗಕ್ಕೆ ತುತ್ತಾಗಿರುವುದರಿಂದ, ತೆಂಗು ಮತ್ತು ಅಡಿಕೆ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ಶ್ರೀ ಎನ್.ಹೆಚ್.ಕೋನರಡ್ಡಿ ರವರು ಮಹಾದಾಯಿ ಕಳಸಾ ಬಂಡೂರಿ ನಾಲಾ ಜೋಡಣೆಯ ಯೋಜನೆಯನ್ನು ತ್ವರಿತವಾಗಿ ಜಾರಿಗೆ ತರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ವೈ.ಎ. ನಾರಾಯಣಸ್ವಾಮಿ** ಇವರು– ಬೆಂಗಳೂರಿನಲ್ಲಿ ಅಕ್ರಮವಾಗಿ ನಡೆಯುತ್ತಿರುವ ಜೂಜು ಅಡ್ಡೆಗಳು, ಸ್ಕಿಲ್ ಗೇಮ್‌ಗಳು, ವಿಡಿಯೋ ಗೇಮ್‌ಗಳು ಮತ್ತು ಹುಕ್ಕಾ ಬಾರ್‌ಗಳನ್ನು ಸಂಪೂರ್ಣವಾಗಿ ನಿಷೇಧಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2. **ಶ್ರೀ ವಿ. ಸುನೀಲ್ ಕುಮಾರ್** ಇವರು– ಕಾರ್ಕಳ ಪಟ್ಟಣಕ್ಕೆ 2ನೇ ಹಂತದ ಒಳಚರಂಡಿ ಯೋಜನೆಯಡಿಯಲ್ಲಿನ ಕಾಮಗಾರಿಗಳ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

3. **ಶ್ರೀ ಪಾಟೀಲ್ ಎ.ಎಸ್.(ನಡಹಳ್ಳಿ)** ಇವರು – ಆಲಮಟ್ಟಿ ಆಣೆಕಟ್ಟಿನಿಂದ ದೇವರಹಿಪ್ಪರಗಿ ಕ್ಷೇತ್ರದಲ್ಲಿ ಬರುವ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವುದಕ್ಕೆ ವಿಶೇಷ ಯೋಜನೆ ರೂಪಿಸುವ ಬಗ್ಗೆ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

4. **ಶ್ರೀ ಕೆ.ಬಿ. ಪ್ರಸನ್ನ ಕುಮಾರ್** ಇವರು– ಶಿವಮೊಗ್ಗ ನಗರದಲ್ಲಿ ಸ್ಥಗಿತಗೊಂಡಿರುವ ವಿಮಾನ ನಿಲ್ದಾಣ ಕಾಮಗಾರಿಯನ್ನು ತುರ್ತಾಗಿ ಪುನರಾರಂಭಿಸಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

5. **ಡಾ|| ಎ.ಬಿ.ಮಾಲಕರಡ್ಡಿ** ಇವರು– ಯಾದಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿ ದಿನ ಕೇವಲ 06 ತಾಸು ವಿದ್ಯುತ್ ಸಂಪರ್ಕ ನೀಡುತ್ತಿರುವುದರಿಂದ ಮಳೆ ನೀರು ಮತ್ತು ಪಂಪ್‌ಸೆಟ್‌ಗಳನ್ನೇ ಅವಲಂಬಿಸುತ್ತಿರುವ ರೈತರಿಗೆ ಆಗುತ್ತಿರುವ ತೊಂದರೆಯನ್ನು ನೀಗಿಸಲು ಪ್ರತಿ ದಿನ 14 ತಾಸು ಪೂರ್ಣ ವಿದ್ಯುತ್ ಸಂಪರ್ಕವನ್ನು ನೀಡುವ ವಿಷಯದ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

...5.

6. **ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ** ಇವರು– ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ವೇದಗಂಗಾ ಮತ್ತು ದೂದಗಂಗಾ ನದಿಗಳು ತುಂಬಿ ಹರಿಯುತ್ತಿದ್ದು, ಗಡಿಯಂಚಿನ ಗ್ರಾಮಗಳಾದ ಕಾರದಗಾ, ಭೋಜ, ಜತ್ರಾಟ, ಸಿದ್ನಾಳ, ಕಲ್ಲೋಳ, ಮಲಿಕವಾಡ ಗ್ರಾಮಗಳ ಹತ್ತಿರದ ಸೇತುವೆಗಳು ಸಂಪೂರ್ಣ ಜಲಾವೃತಗೊಂಡಿದ್ದು, ಜನಸಂಪರ್ಕವನ್ನು ಕಳೆದುಕೊಂಡಿರುವುದರಿಂದ ನೆರೆ ಸಂತ್ರಸ್ಥರ ರಕ್ಷಣೆಗೆ ಮತ್ತು ಪುನರ್‌ವಸತಿಗೆ ತುರ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ** ಇವರು– ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲ್ಲೂಕಿನ ಕೋಲಸಿರ್ಸಿ ಗ್ರಾಮದ ರೈತರು ಬೆಳೆದು ಸಂಗ್ರಹಿಸಿಟ್ಟ ಭತ್ತದ ಗೋಣಬೆಗೆ ಆಕಸ್ಮಿಕವಾಗಿ ಬೆಂಕಿ ತಗುಲಿ ಸಂಪೂರ್ಣವಾಗಿ ಸುಟ್ಟು ಹೋಗಿದ್ದು, ಆರ್ಥಿಕವಾಗಿ ಹಾನಿಗೊಳಗಾದ ರೈತರಿಗೆ ಕೂಡಲೇ ಪರಿಹಾರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. **ಶ್ರೀ ಯು.ಬಿ. ಬಣಕಾರ** ಇವರು– ಸರ್ಕಾರಿ ಪ್ರಾಥಮಿಕ ಶಾಲೆಗಳು ಮುಚ್ಚುವ ಪರಿಸ್ಥಿತಿಗೆ ಅವಕಾಶ ಮಾಡಿಕೊಡಲು ಕಾರಣವಾಗಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ದಿ: 2–7–2016ರ ಆದೇಶ ಮತ್ತು ಸೂಚನೆಯನ್ನು ಹಿಂಪಡೆಯುವಂತೆ ಹಿರೇಕೆರೂರು ತಾಲ್ಲೂಕಿನಲ್ಲಿ ಹಾಗೂ ಇನ್ನಿತರ ಪ್ರದೇಶಗಳಲ್ಲಿ ಪ್ರತಿಭಟನೆ, ಸತ್ಯಾಗ್ರಹಗಳು ನಡೆಯುತ್ತಿದ್ದು, ಮಾರಕವಾದ ಸದರಿ ಆದೇಶವನ್ನು ಹಿಂತೆಗೆದುಕೊಳ್ಳುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9. **ಶ್ರೀ ಜಿ.ಹೆಚ್. ಶ್ರೀನಿವಾಸ್** ಇವರು– 2016–17ನೇ ಸಾಲಿಗೆ ತರೀಕೆರೆ ಪಟ್ಟಣದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಹೋಟೆಲ್ ಮ್ಯಾನೇಜ್‌ಮೆಂಟ್ ಸಂಸ್ಥೆಯನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರ ಗಮನ ಸೆಳೆಯುವುದು.

10. **ಶ್ರೀ ಹೆಚ್.ಕೆ. ಕುಮಾರಸ್ವಾಮಿ** ಇವರು– ಹಾಸನ ಜಿಲ್ಲೆ ಸಕಲೇಶಪುರ ಕ್ಷೇತ್ರದ ನಮ್ಮ ಗ್ರಾಮ, ನಮ್ಮ ರಸ್ತೆ ಯೋಜನೆಯ ಕಾಮಗಾರಿಗಳಿಗೆ 9ನೇ ಟೆಂಡರ್ ಕರೆಗೂ ಗುತ್ತಿಗೆದಾರರು ಬಾರದೆ ಇರುವುದರಿಂದ ಕಾಮಗಾರಿ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

11. **ಶ್ರೀ ಸಿದ್ದು ಬಿ. ನ್ಯಾಮಗೌಡ** ಇವರು– ಕೃಷ್ಣಾ ನದಿಗೆ ಜಮಖಂಡಿ ತಾಲ್ಲೂಕಿನ ಜಂಬಗಿ ಹತ್ತಿರ ಸೇತುವೆ ಕಾಮಗಾರಿ ಪೂರ್ಣಗೊಳಿಸಿ, ಜಮಖಂಡಿ–ಸಾವಳಗಿ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

12. **ಶ್ರೀ ಬಿ.ಆರ್. ಪಾಟೀಲ್** ಇವರು– ಕಲಬುರಗಿ ಜಿಲ್ಲೆಯಲ್ಲಿ ಬರಗಾಲದಿಂದ ತತ್ತರಿಸಿರುವ ರೈತರಿಗೆ ಕೃಷಿ ವಿಮೆ ಹಣ ಪಾವತಿ ಮಾಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

...6.

13. **ಶ್ರೀ ಹೆಚ್.ಡಿ. ರೇವಣ್ಣ** ಇವರು– ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕು ಬಾರೆಹೊಸೂರು ಮತ್ತು ದೊಡ್ಡಕುಂಚೆ ಶಾಖಾ ಕಛೇರಿಯ ಕಿರಿಯ ಇಂಜಿನೀಯರ್‌ರವರು ರೈತರ ಪಂಪು ಸೆಟ್ಟುಗಳಿಗೆ ಅಕ್ರಮ–ಸಕ್ರಮ ಯೋಜನೆಯಡಿಯಲ್ಲಿ ವಸೂಲು ಮಾಡಿರುವ ಹಣವನ್ನು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸದೇ ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

14. **ಶ್ರೀ ಹೆಚ್.ಎಸ್. ಶಿವಶಂಕರ್** ಇವರು– ದಾವಣಗೆರೆ ಕಂದಾಯ ಉಪ ವಿಭಾಗದ ಕಾರ್ಯಭಾರದ ಒತ್ತಡವನ್ನು ನೀಗಿಸಲು ಹರಿಹರ ಮತ್ತು ಹೊನ್ನಾಳಿ ತಾಲ್ಲೂಕುಗಳನ್ನೊಳಗೊಂಡ ಹೊಸ ಕಂದಾಯ ಉಪ ವಿಭಾಗವನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15. **ಶ್ರೀ ಎಸ್.ಟಿ. ಸೋಮಶೇಖರ್** ಇವರು– ಬೆಂಗಳೂರು ಉತ್ತರ ತಾಲ್ಲೂಕಿನ ತುಂಗಾನಗರದಲ್ಲಿ ಸ್ಥಳಾಂತರಗೊಂಡಿರುವ ಮದ್ಯದಂಗಡಿಯಲ್ಲಿ ನಿಯಮ ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

16. **ಶ್ರೀ ಬಿ.ಆರ್. ಯಾವಗಲ್** ಇವರು– ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ ಕಡಲೆ ಬೀಜ ಪೂರೈಕೆ ಮಾಡಿದ ರೈತರಿಗೆ, ಸರಿಯಾದ ಬೆಲೆ ಸಿಗದೆ ಆಗಿರುವ ನಷ್ಟವನ್ನು ತುಂಬಿ ಕೊಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

9. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. <u>ಖಾಸಗಿ ನಿರ್ಣಯ</u>

1.**ಶ್ರೀ ಎಂ.ಟಿ.ಕೃಷ್ಣಪ್ಪ, ಅವರು** – ದಿನಾಂಕ: 02–07–2015ರಂದು "ಕರ್ನಾಟಕ ವಿಧಾನ ಪರಿಷತ್ತನ್ನು ರದ್ದುಪಡಿಸುವ ಬಗ್ಗೆ" ಮಂಡಿಸಿದ್ದ ಖಾಸಗಿ ನಿರ್ಣಯವನ್ನು ಹಿಂಪಡೆಯಲು ಪ್ರಸ್ತಾವ ಮಂಡಿಸುವುದು.

2.**ಶ್ರೀ ಕೆ.ಗೋಪಾಲಯ್ಯ ಅವರು– ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು.**

"ವಿಭಜನೆಗೊಂಡ ಬೆಂಗಳೂರು ವಿಶ್ವವಿದ್ಯಾಲಯದ ಯಾವುದಾದರೂ ಒಂದು ವಿಶ್ವವಿದ್ಯಾಲಯಕ್ಕೆ ನಟಸಾರ್ವಭೌಮ ಡಾ: ರಾಜಕುಮಾರ್ ರವರ ಹೆಸರನ್ನು ನಾಮಕರಣ ಮಾಡಬೇಕೆಂದು ಈ ಸದನವು ನಿರ್ಣಯಿಸುತ್ತದೆ."

...7.

II. ಖಾಸಗಿ ಸದಸ್ಯರ ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕ–2015
(2015ರ ಖಾಸಗಿ ಸದಸ್ಯರ ವಿಧೇಯಕ –02)
ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:–

ಅ) 2015ನೇ ಸಾಲಿನ ಕರ್ನಾಟಕ ಭೂ ಕಂದಾಯ (2015ರ ಖಾಸಗಿ ಸದಸ್ಯರ ವಿಧೇಯಕ–02) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://www.kla.kar.nic.in/assembly/lob/lob.htm)